ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಮೀನುಮರಿ ಉತ್ಪಾದನಾ ಕೇಂದ್ರ ಸ್ಥಾಪಿಸುವ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

1033 (1192) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಹಾಸನ ಜಿಲ್ಲೆಯಲ್ಲಿ ಮೀನುಗಾರಿಕೆ ನಡೆಸಲು ಲಭ್ಯವಿರುವ ಮೀನುಗಾರಿಕೆ ಇಲಾಖೆ ಮತ್ತು ಗ್ರಾಮ ಪಂಚಾಯಿತಿ ವ್ಯಾಪ್ತಿಗೊಳಪಡುವ ಜಲಸಂಪನ್ಮೂಲಗಳು ಯಾವುವು; (ಮಾಹಿತಿ ನೀಡುವುದು) ಸದರಿ ಜಲಸಂಪನ್ಮೂಲಗಳನ್ನು ಯಾವ ರೀತಿ ಅಭಿವೃದ್ಧಿ ಪಡಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಜಲಸಂಪನ್ಮೂಲಗಳನ್ನು ಅಭಿವೃದ್ಧಿಪಡಿಸಲು ವಾರ್ಷಿಕವಾಗಿ ಅಗತ್ಯವಿರುವ ಮೀನುಮರಿಗಳ ಪ್ರಮಾಣ ಎಷ್ಟು ಮತ್ತು ಹಾಸನ ಜಿಲ್ಲೆಗೆ ಇಲಾಖೆಯಿಂದ ವಾರ್ಷಿಕವಾಗಿ ಸರಬರಾಜು ಆಗುತ್ತಿರುವ ಮೀನುಮರಿ ಪ್ರಮಾಣವೆಷ್ಟು; (ಕಳೆದ 3 ವರ್ಷಗಳ ಮಾಹಿತಿ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿ ಮೀನುಮರಿಗಳಿಗೆ ಬಹಳ ಬೇಡಿಕೆ ಇದ್ದು, ಮೀನುಮರಿ ಉತ್ಪಾದನೆ ಮಾಡಲು ಅನುಕೂಲಕರ ಸ್ಥಳಗಳಿದ್ದರೂ ಸಹ ಜಿಲ್ಲೆಯಲ್ಲಿ ಮೀನುಮರಿ ಉತ್ಪಾದನಾ ಕೇಂದ್ರ ಸ್ಥಾಪನೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಪ್ರದೇಶದಲ್ಲಿ ಮೀನುಮರಿ ಉತ್ಪಾದನಾ ಕೇಂದ್ರ ಸ್ಥಾಪನೆ ಮಾಡಲಾಗುವುದು; ಯಾವ ಕಾಲಮಿತಿಯೊಳಗೆ ಉತ್ಪಾದನಾ ಕೇಂದ್ರ ಸ್ಥಾಪನೆ ಮಾಡಿ ರೈತರಿಗೆ ಮೀನುಮರಿ ಸರಬರಾಜು ಮಾಡಲಾಗುವುದು? (ವಿವರ ನೀಡುವುದು)